# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ: 03-07-2021 ರಂದು ಬೆಳಿಗ್ಗೆ 11.30 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಿಂಗಸಂದ್ರ ವಾರ್ಡ್ ಸಂಖ್ಯೆ-191 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ಪ್ರಸನ್ನಕುಮಾರ.ವಿ. ಉಪ-ಆಯುಕ್ತರು ರವರ ಸಮ್ಮುಖದಲ್ಲಿ ಅವರ ಅನುಮತಿಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ಪ್ರಾರಂಭದಲ್ಲಿ ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಎ.ಪಿ.ಶಿವಕುಮಾರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-191, ಸಿಂಗಸಂದ್ರ ರವರು ಸಭೆಗೆ ಹಾಜರಾಗಿರುವ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

ಹಿಂದಿನ ಸಭೆಯ ನಡಾವಳಿಗಳನ್ನು ಸಭೆಯಲ್ಲಿ ಮಂಡಿಸಿ ಸಂಬಂಧಪಟ್ಟ ಅಧಿಕಾರಿಗಳಿಂದ ಹಿಂದಿನ ಸಭೆಯ ನಡಾವಳಿಗಳ ಪಾಲನೆಯ ಬಗ್ಗೆ ಮಾಹಿತಿ ಪಡೆಯಲಾಯಿತು. ಅದರಂತೆ ಇಂದಿನ ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು ಈ ಕೆಳಕಂಡಂತಿರುತ್ತದೆ.

1.ಕೋವಿಡ್-19 ಮಹಾಮಾರಿ ಸಾಂಕ್ರಮಿಕರೋಗ ಹರಡದಂತೆ ಮುಂಜಾಗ್ರತಕ್ರಮ ಕೈಗೊಳ್ಳಲು ತೆಗೆದುಕೊಳ್ಳಬಹುದಾದ ಕ್ರಮಗಳು.

2.ವಿಪತ್ತು ನಿರ್ವಹಣಾ ಸಮಿತಿ(ಡಿಸಾಸ್ಟರ್ ಮ್ಯಾನೇಜಮೆಂಟ್‌ಕಮಿಟಿ) ನಿರ್ವಹಿಸಬೇಕಾದ ಕ್ರಮಗಳ ಬಗ್ಗೆ.

3.ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವುದು.

4.ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸುವುದು,

5.ಮಳೆಯಿಂದ ಸಂಭವಿಸಿದ/ ಸಂಭವಿಸಬಹುದಾದ ಅನಾಹುತಗಳ ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸುವುದು,

6.BWSSB Project ಮತ್ತು ನಿರ್ವಹಣೆಯ ಬಗ್ಗೆ ಚರ್ಚಿಸುವುದು,

7.ಕುಡಿಯುವನೀರು ಸರಬರಾಜು ಬಗ್ಗೆಚರ್ಚಿಸುವುದು,

8.ಗೇಲ್‌ಗ್ಯಾಸ್ ಪೈಪ್ ಲೈನ್ ನಿರ್ವಹಣೆಯ ಬಗ್ಗೆಚರ್ಚಿಸುವುದು,

ಸಭೆಯ ನಡಾವಳಿಗಳು

1. ವಾರ್ಡ್ ನಂ 191 ಸಿಂಗಸಂದ್ರ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಕೂಡ್ಲು ದೊಡ್ಡಕೆರೆ ಮತ್ತು ಚಿಕ್ಕಕೆರೆಗಳ ಸುತ್ತಮುತ್ತ ಬೀದಿದೀಪಗಳನ್ನು ಅಳವಡಿಸಬೇಕೆಂದು ಲೇಕ್ ಅಭಿಯಂತರರು ಸಭೆಯಲ್ಲಿ ಕೋರಿದರು. ಅದಕ್ಕೆ ನೋಡಲ್ ಅಧಿಕಾರಿಗಳು ಬೀದಿದೀಪದ ಸಹಾಯಕ ಕಾರ್ಯಪಾಲಕ ಅಭಿಯಂತರ ರವರಿಗೆ ಹೊಸದಾಗಿ ಬೀದಿದೀಪಗಳನ್ನು ಅನುವು ಮಾಡಿಕೊಳ್ಳಲು ಸೂಚಿಸಿದರು.
2. ವಾರ್ಡ್ ನಂ 191 ಸಿಂಗಸಂದ್ರ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಕೂಡ್ಲು ದೊಡ್ಡಕೆರೆಗೆ ಒಬ್ಬ ಸೆಕ್ಯುರಿಟಿ ಗಾರ್ಡ್‌ನ್ನು ನೇಮಿಸಬೇಕೆಂದು ಎನ್.ಜಿ.ಓ ರವರು ಸಭೆಯಲ್ಲಿ ಕೋರಿದರು.
3. ವಾರ್ಡ್ ನಂ 191 ಸಿಂಗಸಂದ್ರ ವ್ಯಾಪ್ತಿಯಲ್ಲಿ ಬರುವ ಒಂಟಿ ಮನೆ ಯೋಜನೆಯಡಿ ಒಂದು ವಾರ್ಡ್‌ಗೆ 1 ಕೋಟಿ ಅನುದಾನ ನೀಡಿದರೆ ಅದನ್ನು ಹೇಗೆ ಹಂಚಲು ಸಾಧ್ಯ ಎಂದು ಮಾಜಿ ಕಾರ್ಪೊರೇಟರ್ ಮತ್ತು ಸಾರ್ವಜನಿಕರವರ ಅಭಿಪ್ರಾಯವಾಗಿತ್ತು. ಹಾಗೂ ಈಗ ಅದನ್ನು ಕಲ್ಯಾಣ ಇಲಾಖೆಗೆ ವಹಿಸಿರುವುದು ಕಂಡು ಬಂದಿದ್ದು. ಇದರ ಬಗ್ಗೆ ಪೂರ್ಣ ಮಾಹಿತಿ ನೀಡಲು ಬಿ.ಬಿ.ಎಂ.ಪಿ ಅಭಿಯಂತರರಿಗೆ ರವರಿಗೆ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.
4. ಸದ್ಗುರು ಸಾಯಿನಾಥ ಸ್ಕೂಲ್ ರೋಡ್ ಎರಡು ಅಪಾರ್ಟ್‌ಮೆಂಟ್ ಹತ್ತಿರ ಮೋರಿ ನೀರು ಹರಿದು ಬರುತ್ತದೆ ಎಂದು ಸ್ಥಳಿಯರು ದೂರನ್ನು ನೀಡಿದರು. ಇದರ ಬಗ್ಗೆ ಕ್ರಮ ವಹಿಸಲು ಬಿ.ಬಿ.ಎಂ.ಪಿ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.
5. ಕೂಡ್ಲು ಗ್ರಾಮದ ಅಂಬೇಡ್ಕರ್ ಕಾಲೋನಿಯಲ್ಲಿ ಎಲ್ಲಮ್ಮ ದೇವಸ್ಥಾನದ ಹತ್ತಿರ ಒಂದು ಕಂಬದ ಅವಶ್ಯಕತೆ ಇದ್ದು, ಅದನ್ನು ಹಾಕಲು ಸ್ಥಳಿಯರಾದ ಶ್ರೀ ಚಿಕ್ಕಮುನಿಯಪ್ಪ ರವರು ತಿಳಿಸಿದರು. ನೋಡಲ್ ಅಧಿಕಾರಿಗಳು ಬೆಸ್ಕಾಂ ಎಇ ರವರಿಗೆ ಕಂಬವನ್ನು ಅಳವಡಿಸಲು ಸೂಚಿಸಿದರು.
6. ಸಿಲ್ವರ್ ಕೌಂಟಿ ರೋಡ್‌ನಲ್ಲಿ ಸ್ಯಾನಿಟರಿ ಲೈನ್ ಸರಿಯಾಗಿ ಹಾಕಿಲ್ಲವೆಂದು ಸಾರ್ವಜನಿಕರು ದೂರನ್ನು ನೀಡಿದರು ಬಿ.ಡಬ್ಲ್ಯೂ.ಎಸ್.ಎಸ್.ಬಿಯಿಂದ ಹೊಸದಾಗಿ ಲೈನ್ ಹಾಕಿಕೊಡಲು ತಿಳಿಸುತ್ತೇನೆಂದು ಬಿ.ಬಿ.ಎಂ.ಪಿ ಅಭಿಯಂತರರು ಸಭೆಯಲ್ಲಿ ತಿಳಿಸಿದರು. ನೋಡಲ್ ಅಧಿಕಾರಿಗಳು ಇದರ ಬಗ್ಗೆ ಕ್ರಮವಹಿಸಲು ಸೂಚನೆ ನೀಡಿದರು.

7. ವಾರ್ಡ್ ವ್ಯಾಪ್ತಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ॥ ನವೀನ್ ರವರು 45+ ಇರುವ ಸಾರ್ವಜನಿಕರಿಗೆ ಲಸಿಕೆಯನ್ನು ವಾರ್ಡ್ ಕಛೇರಿಯಲ್ಲಿ ನೀಡುತ್ತೇವೆ. ಮತ್ತು 18+ ಇರುವ ಸಾರ್ವಜನಿಕರಿಗೆ ಹಂತ ಹಂತವಾಗಿ ಲಸಿಕೆಯನ್ನು ನೀಡುತ್ತೇವೆಂದು ಸಭೆಯಲ್ಲಿ ತಿಳಿಸಿದರು. ಕೂಡ್ಲು ನಲ್ಲಿ ಲಸಿಕೆಯನ್ನು ಹೆಚ್ಚು ಹೆಚ್ಚಾಗಿ ನೀಡಲು ನೋಡಲ್ ಅಧಿಕಾರಿಗಳು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಿಗೆ ಸೂಚಿಸಿದರು.
8. ಕೂಡ್ಲು, ಮತ್ತು ನಾಗನಾಥಪುರದಲ್ಲಿ ಸ್ಯಾನಿಟರಿ ಕಂಪ್ಲೇಂಟ್ ಹೆಚ್ಚಾಗಿ ಬರುತ್ತಿದ್ದು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸ್ಯಾನಿಟರಿ ಕಂಪ್ಲೇಂಟ್‌ಗಳನ್ನು ಸೂಕ್ತವಾಗಿ ಬಗೆಹರಿಸಲು ನೋಡಲ್ ಅಧಿಕಾರಿಗಳು ಬಿ.ಬಿ.ಎಂ.ಪಿ ಅಭಿಯಂತರರಿಗೆ ವಾರ್ಡ್ ಕಮಿಟಿ ಸಭೆಯಲ್ಲಿ ಸೂಚಿಸಿದರು.
9. ಕೂಡ್ಲು ಸ್ಲಂ ಬೋರ್ಡ್‌ನಲ್ಲಿ ಯು.ಜಿ.ಡಿ ಪೈಪ್ ಲೈನ್ ನಲ್ಲಿ ಪೂರ್ಣ ಪ್ರಮಾಣದಲ್ಲಿ ಬ್ಲಾಕ್ ಆಗಿರುವುದು ಕಂಡು ಬಂದಿದ್ದು, ಅದನ್ನು ಸ್ಲಂ ಬೋರ್ಡ್ ಅಧಿಕಾರಿಗಳಿಗೆ ಪತ್ರ ಬರೆದು ತುರ್ತಾಗಿ ಕ್ರಮ ಕೈಗೊಂಡು ಸರಿಪಡಿಸಲು ಅಥವಾ ಹೊಸದಾಗಿ ಯು.ಜಿ.ಡಿ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಲು ನೋಡಲ್ ಅಧಿಕಾರಿಗಳು ಬಿ.ಬಿ.ಎಂ.ಪಿ ಅಭಿಯಂತರರಿಗೆ ಸೂಚಿಸಿದರು.

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

03/07/2021
ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ –191 ಸಿಂಗಸಂದ್ರ

3/7/21
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ 191, ಸಿಂಗಸಂದ್ರ

**ಪ್ರತಿಗಳು:–**

1) ಮಾನ್ಯ ಆಡಳಿತಗಾರರು, ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
2) ಮಾನ್ಯ ಆಯುಕ್ತರು, ಬೃ.ಬೆಂ.ಮ.ಪಾಲಿಕೆ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
3) ಮಾನ್ಯ ಶಾಸಕರು, ಬೊಮ್ಮನಹಳ್ಳಿ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ

4) ಮಾನ್ಯ ಶಾಸಕರು, ಬೆಂಗಳೂರು ದಕ್ಷಿಣ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ

5) ಮಾನ್ಯ ಶಾಸಕರು, ಆನೇಕಲ್ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ

6) ವಲಯ ಆಯುಕ್ತರು, ಬೊಮ್ಮನಹಳ್ಳಿ ವಲಯ, ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ

7) ಜಂಟಿ ಆಯುಕ್ತರು, ಬೊಮ್ಮನಹಳ್ಳಿ ವಲಯರವರ ಆವಗಾಹನೆಗೆ ಮಂಡಿಸಿದೆ.

8) ಉಪ ಆಯುಕ್ತರು, ಬೊಮ್ಮನಹಳ್ಳಿ ವಲಯರವರ ಆವಗಾಹನೆಗೆ ಮಂಡಿಸಿದೆ

9) ಮುಖ್ಯ ಅಭಿಯಂತರರು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ

10ಆರೋಗ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ

11) ಅರಣ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ

12) ಡಿ.ಜಿ.ಎಂ. ಗೇಲ್‌ಗ್ಯಾಸ್‌ರವರಿಗೆ ಮುಂದಿನ ಕ್ರಮಕ್ಕಾಗಿ,

13) ಮುಖ್ಯಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರ ಅವಗಾಹನೆಗೆ ಕಳುಹಿಸಿದೆ

14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕಾಗಿ

15)ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಎಂ.ಆರ್.ಸಿ.ಎಲ್ ರವರಿಗೆ ಮುಂದಿನ ಕ್ರಮಕ್ಕಾಗಿ

16) ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ, ಬೃ.ಬೆಂ.ಮ.ಪಾ. ರವರಿಗೆ ಮುಂದಿನ ಕ್ರಮಕ್ಕಾಗಿ

17) ಪಿ.ಎಸ್.ಐ. ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ, ಪರಪ್ಪನಅಗ್ರಹಾರಠಾಣೆ,

18) ಕಂದಾಯಅಧಿಕಾರಿ (ಬೇಗೂರು) ವಲಯರವರ ಅವಗಾಹನೆಗೆ ಮಂಡಿಸಿದೆ

19) ವಾರ್ಡ್ ಸಮಿತಿ ಸದಸ್ಯರುರವರಿಗೆ ಕಳುಹಿಸಲಾಗಿದೆ.

20) ಕಛೇರಿಕಡತಕ್ಕೆ